UASB
LIBRARY
Newspaper Clippings
Pg .1 Tuesday 27-07-2021 Jai Kisan



ಟಿಶ್ಯೂ ಕಲ್ಚರ್ ಎಂಬ ಊತಕ ಕೃಷಿ

ಸಸ್ಯಲೋಕದ ಅಭಿವೃದ್ಧಿಗೆ ಏನೆಲ್ಲಾ ಪ್ರಯೋಗಗಳು ನಡೆಯುತ್ತಿವೆ. ಇವುಗಳಲ್ಲಿ ಟಿಶ್ಯೂ ಕಲ್ಚರ್ ಅಥವಾ ಊತಕ ಕೃಷಿಯೂ ಒಂದು. ಒಂದು ಜೀವಿಯ ಕೋಶ ಅಥವಾ ಅಂಗಾಂಶವನ್ನು ಬಾಹ್ಯ ಮಾಧ್ಯಮವೊಂದರಲ್ಲಿ ಬೆಳೆಸುವ ಕ್ರಮಕ್ಕೆ ಊತಕ ಕೃಷಿ ಎನ್ನುತ್ತಾರೆ. ಭ್ರೂಣಕೋಶಗಳ ಬೇರ್ಪಡಿಸುವಿಕೆಯಿಂದ ಭತ್ತ, ಕಬ್ಬು, ಜೋಳ ಮೊದಲಾದ ಬೆಳೆಗಳ ಹಲವಾರು ತಳಿಗಳನ್ನು ಉತ್ಪಾದಿಸಲಾಗಿದೆ. ಆರ್ಕಿಡ್, ವೆನಿಲ್ಲಾ ಮತ್ತು ಹೂಗಿಡಗಳಲ್ಲಿ ಉಪಯುಕ್ತ ತಳಿಗಳನ್ನು ಊತಕ ಕೃಷಿ ವಿಧಾನದಿಂದ ಅಧಿಕ ಸಂಖ್ಯೆಯಲ್ಲಿ ಉತ್ಪಾದಿಸಲಾಗುತ್ತಿದೆ. ಸಸ್ಯ ವೈವಿಧ್ಯತೆಯನ್ನು ಕಾಪಾಡಿಕೊಳ್ಳುವುದು, ತಳಿಗಳಲ್ಲಿ ಪರಿವರ್ತನೆ ಉಂಟುಮಾಡಲು ಊತಕ ಕೃಷಿ ಮಹತ್ವದ್ದಾಗಿದೆ. ಬೀಜಗಳಿಂದ ಸಸಿಗಳನ್ನು ಉತ್ಪಾದಿಸುವುದು ಸಾಮಾನ್ಯವಾಗಿ ಬಳಕೆಯಲ್ಲಿರುವ ಕ್ರಮ. ಆದರೆ ಊತಕ ಕೃಷಿಯಿಂದ ಕಾಂಡ, ಕೊಂಬೆ, ಕುಡಿ, ಬಳ್ಳಿ, ಗೆಡ್ಡೆಗಳಿಂದಲೂ ಸಸ್ಯೋತ್ಪಾದನೆ ಮಾಡಬಹುದು. ಸಸ್ಯಗಳ ಊತಕಗಳನ್ನು ಬೇರ್ಪಡಿಸಿ ಹೊರಗಡೆ ಬೆಳೆಸಿದರೆ ಅದರ ಕೋಶಗಳು ವಿಭಜನೆಗೊಳ್ಳುತ್ತವೆ. ಊತಕಗಳ ಚಟುವಟಿಕೆಯಿಂದ ಒಂದು ಕೋಶ ಉತ್ಪತ್ತಿಯಾಗಿತ್ತದೆ. ಇದು ಊತಕ ಸಸ್ಯೋತ್ಪಾದನಾ ವಿಧಾನ.



■ ಡಾ. ಲಿಂಗರಾಜ ರಾಮಾಪುರ

ಕುಸುಕನ ಬಳ್ಳಿ

ದಕ್ಷಿಣ ಭಾರತದ ಕಾಡುಗಳಲ್ಲಿ ಕಂಡುಬರುವ ಕುಸುಕನ ಬಳ್ಳಿ, ನೀರ್ಬಳ್ಳಿ, ಬಿಳಿಯಾದಿ ಮುಂತಾದ ಹೆಸರುಗಳಿಂದ ಕರೆಯಲ್ಪಡುವ ಇದು 10 ಮೀಟರ್ ಎತ್ತರದವರೆಗೆ ಬೆಳೆಯುವ ಪೊದೆಸಸ್ಯವಾಗಿದೆ. ಇದರ ವೈಜ್ಞಾನಿಕ ಹೆಸರು ಕ್ಯಾಲಿಕೊಪ್ಟೆರಿಸ್ ಫ್ಲೋರಿಬುಂಡಾ.. ಇದರ ಕಾಂಡಗಳಲ್ಲಿ ಬಹಳಷ್ಟು ಸಂಗ್ರಹವಾಗಿರುವ ನೀರು ಇರುತ್ತದೆ. ಆದ್ದರಿಂದ ಕಾಡಿನಲ್ಲಿ ಕೆಲಸ ಮಾಡುವವರು ಕಾಂಡಗಳನ್ನು ಕತ್ತರಿಸಿ ಬೇಸಿಗೆಯಲ್ಲಿ ನೀರನ್ನು ಕುಡಿಯುತ್ತಾರೆ. ಕಾಂಡ ಮತ್ತು ಎಲೆಗಳು ಔಷಧೀಯ ಗುಣಗಳನ್ನು ಹೊಂದಿವೆ ಎಂದು ಹೇಳಲಾಗುತ್ತದೆ. ಪಶ್ಚಿಮ ಘಟ್ಟದ ತಗ್ಗು ಪ್ರದೇಶದ ಉಷ್ಣವಲಯದ ನಿತ್ಯಹರಿದ್ವರ್ಣ ಕಾಡುಗಳಲ್ಲಿ ಮತ್ತು ಅಪರೂಪವಾಗಿ ಕರಾವಳಿ ಆಂಧ್ರ ಪೂರ್ವ ಘಟ್ಟಗಳಲ್ಲಿ ಉಕ್ಷಿ ಕಂಡುಬರುತ್ತದೆ. ಈ ಸಸ್ಯವನ್ನು ಭಾರತದ ಮಧ್ಯ ಮತ್ತು ದಕ್ಷಿಣ ಭಾಗಗಳಲ್ಲಿ ಬೆಳೆಯಲಾಗುತ್ತದೆ. ಇದು ಬೂದುಬಣ್ಣದ ತೊಗಟೆ ಮತ್ತು ಮೇಲ್ಭಾಗದಲ್ಲಿ ದಪ್ಪ ನಯವಾದ ಮೃದುವಾದ ಕೊಂಬೆಗಳನ್ನು ಹೊಂದಿರುತ್ತದೆ. ಹುಣ್ಣು, ಮತ್ತು ಚರ್ಮದ ಕಾಯಿಲೆಗಳಲ್ಲಿ ಈ ಹಣ್ಣುಗಳನ್ನು ಬಳಸುತ್ತಾರೆ.



■ ಹನುಮಂತ.ಮ.ದೇಶಕುಲಕರ್ಣಿ.

"Over thiking kills your happiness"

ಅನ್ನದಾತರಿಗೆ ಶಾಕ್ ಶೇ.20ರಿಂದ 30 ಹಣ ರೈತರ ಹಳೆಯ ಸಾಲದ ಖಾತೆಗೆ ಸಂದಾಯ | ಎಷ್ಟೇ ಬೇಡಿಕೊಂಡರೂ ಕೇಳಿಸಿಕೊಳ್ಳದ ಬ್ಯಾಂಕ್ ಮ್ಯಾನೇಜರ್‌ಗಳು

ರಾಗಿ ಬೆಂಬಲ ಬೆಲೆ ದುಡ್ಡು ರೈತರ ಸಾಲಕ್ಕೆ ಜಮಾ!

• ಸಿ.ಡಿ.ಎಂ. ಸಿದ್ದು ಸಿಬಿ ಕೆರೆ

ಕನ್ನಡಪ್ರಭ ವಾರ್ತೆ ಬೆಂಗಳೂರು

ಬೆಂಬಲ ಬೆಲೆ ಯೋಜನೆಯಡಿ ಸರ್ಕಾರ ಖರೀದಿಸಿದ್ದ ರಾಗಿಯ ಹಣ ರೈತರ ಬ್ಯಾಂಕ್ ಖಾತೆಗಳಿಗೆ ಜಮೆಯಾಗುತ್ತಿದ್ದಂತೆ ರೈತರ ಹಳೆಯ ಸಾಲದ ಮೊತ್ತವನ್ನು ಬ್ಯಾಂಕ್‌ಗಳು ಮುರಿದುಕೊಳ್ಳುತ್ತಿದ್ದು, ಇದಕ್ಕೆ ರೈತರಿಂದ ವ್ಯಾಪಕ ಆಕ್ರೋಶ ವ್ಯಕ್ತವಾಗಿದೆ.

ಬ್ಯಾಂಕ್‌ನಲ್ಲಿ ಚೆಕ್ ಕೊಟ್ಟು ಟೋಕನ್ ಹಿಡಿದು ಹಣ ಕ್ಕಾಗಿ ಕೌಂಟರ್ ಮುಂದೆ ರೈತರು ನಿಂತಾಗ, ಖಾತೆ ಪರಿಶೀಲಿಸಿ ಸಾಲ ಇರುವ ಬಗ್ಗೆ ದೃಢಪಡಿಸಿಕೊಳ್ಳುವ ಬ್ಯಾಂಕ್ ಸಿಬ್ಬಂದಿ ರೈತರಿಗೆ ಹಣ ನೀಡದೆ ಬ್ಯಾಂಕ್ ಮ್ಯಾನೇಜರ್ ಬಳಿ ಕಳುಹಿಸುತ್ತಿದ್ದಾರೆ. ಅಲ್ಲಿ ರೈತರೊಂದಿಗೆ ಚೌಕಾಶಿ ನಡೆಸುವ ವ್ಯವಸ್ಥಾಪಕರು, ಹಳೆಯ ಸಾಲಕ್ಕೆ ಪೂರ್ತಿ ಹಣ ಮುರಿದುಕೊಳ್ಳುತ್ತೇವೆ ಎಂದು ಮೊದಲಿಗೆ ಪೀಠಿಕೆ ಹಾಕಿ ನಂತರ ಬೆಂಬಲ ಬೆಲೆ ಯೋಜನೆಯಡಿ ಆ ರೈತರ ಖಾತೆಗೆ ಎಷ್ಟು ಹಣ ಜಮೆಯಾಗಿರುತ್ತದೆಯೋ ಅದರ ಆಧಾರದ ಮೇಲೆ ಶೇ.20ರಿಂದ 30 ಹಣವನ್ನು ಸಾಲದ ಖಾತೆಗಳಿಗೆ ಜಮಾ ಮಾಡಿಕೊಳ್ಳುತ್ತಿದ್ದಾರೆ.

ರಾಗಿಗೆ ಕ್ವಿಂಟಲ್‌ಗೆ 3339 ರು. ಬೆಂಬಲ ಬೆಲೆಯನ್ನು ಸರ್ಕಾರ ನೀಡಿದ್ದು, ಗರಿಷ್ಠ ಎಂದರೆ 50 ಕ್ವಿಂಟಲ್‌ವರೆಗೆ ರೈತರ ಖಾತೆಗೆ ಹಣ ಜಮೆಯಾಗಿದೆ. ಕಡಿಮೆ ಬೆಳೆದವರು ತಮ್ಮ ಪಹಣಿಯಲ್ಲಿ ಬೇರೆಯವರ ರಾಗಿಯನ್ನೂ ಎಪಿಎಂಸಿಗಳಿಗೆ ಹಾಕಿದ್ದಾರೆ. ಆದರೆ, ಬ್ಯಾಂಕ್‌ಗಳ ಈ ಕಾರ್ಯದಿಂದ ಅಂತಹವರು ಹೆಚ್ಚಿನ ಸಂಕಷ್ಟಕ್ಕೆ ಸಿಲುಕಿದ್ದಾರೆ.

ಕಳೆದ ವರ್ಷ ಕೋವಿಡ್ ಸಂಕಷ್ಟದಿಂದಾಗಿ ಬೆಳೆಗಳಿಗೆ ಸರಿಯಾದ ಬೆಲೆ ಸಿಗದೇ ರೈತರು ಸಂಕಷ್ಟ ಅನುಭವಿಸಿದ್ದರು. ಇದೀಗ ಎಲ್ಲೆಡೆ ಉತ್ತಮ ಮಳೆಯಾಗುತ್ತಿದ್ದು, ರಾಗಿ ಬಿತ್ತಲು ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ. ಹೊಲಗಳನ್ನು ಉಳುಮೆ ಮಾಡಿಟ್ಟುಕೊಂಡಿದ್ದು ಬೀಜ ಮತ್ತು ಗೊಬ್ಬರಕ್ಕೆ ಹಣದ ಅವಶ್ಯಕತೆಯಿದೆ.

ಒಟಿಎಸ್‌ಗೂ ಕುತ್ತು: ಬ್ಯಾಂಕ್ ಸಾಲ ಎನ್‌ಪಿಎ (ನಾನ್ ಪರ್‌ಫಾರ್ಮಿಂಗ್ ಅಸೆಟ್) ಆಗಿದ್ದರೆ ರೈತರು ಬ್ಯಾಂಕ್ ವ್ಯವಸ್ಥಾಪಕರೊಂದಿಗೆ ಮಾತನಾಡಿ ಒನ್ ಟೈಂ ಸೆಟ್ಲ್‌ಮೆಂಟ್ (ಒಟಿಎಸ್) ಮಾಡಿಕೊಳ್ಳಲು ಅವಕಾಶವಿರುತ್ತದೆ. ಸೆಟ್ಲ್‌ಮೆಂಟ್ ಮಾಡಿಕೊಂಡರೆ ಒಂದಷ್ಟು ಮೊತ್ತವನ್ನು ಬಿಟ್ಟು ಉಳಿದ ಹಣ ಪಾವತಿಸಬಹುದು. ಆದರೆ ಎನ್‌ಪಿಎ ಆದ ಸಾಲದ ಖಾತೆಗಳಿಗೂ ಇದೀಗ ಬೆಂಬಲ ಬೆಲೆ ಯೋಜನೆಯಡಿ ಬಂದ ಒಂದಷ್ಟು ಹಣ ಜಮಾ ಮಾಡುತ್ತಿರುವುದರಿಂದ ಸೆಟ್ಲ್‌ಮೆಂಟ್ ಅವಕಾಶ ಕಳೆದುಕೊಳ್ಳಬೇಕಾಗುತ್ತದೆ ಎಂಬ ಆತಂಕವನ್ನು ರೈತರು ವ್ಯಕ್ತಪಡಿಸುತ್ತಿದ್ದಾರೆ.

ನಾವೊಬ್ಬರೇ ಕಟ್ ಮಾಡಿಲ್ಲ

ಎಲ್ಲಾ ಕಡೆ, ಎಲ್ಲಾ ಬ್ಯಾಂಕ್‌ಗಳೂ ರೈತರ ಖಾತೆಗಳಿಗೆ ಬಂದ ಬೆಂಬಲ ಬೆಲೆ ಯೋಜನೆಯ ಹಣವನ್ನು ಬ್ಯಾಂಕ್‌ನ ಹಳೆಯ ಸಾಲಗಳಿಗೆ ಒಂದಷ್ಟನ್ನು ಜಮಾ ಮಾಡಿಕೊಳ್ಳುತ್ತಿವೆ. ನಮ್ಮ ಬ್ಯಾಂಕ್‌ನಲ್ಲೂ ಜಮಾ ಮಾಡಿಕೊಂಡಿದ್ದೇವೆ ಎನ್ನುತ್ತಾರೆ ಚಿಕ್ಕಮಗಳೂರು ಜಿಲ್ಲೆ ಕಡೂರು ತಾಲೂಕುಯಗಟಿ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ವ್ಯವಸ್ಥಾಪಕ ಚನ್ನಕೇಶವ.

ಸರ್ಕಾರದ ಯಾವುದೇ ಯೋಜನೆಯ ಹಣವನ್ನು ಬ್ಯಾಂಕ್‌ಗಳು ಸಾಲಕ್ಕೆ ಜಮಾ ಮಾಡಿಕೊಳ್ಳುವಂತಿಲ್ಲ. ಈ ಬಗ್ಗೆ ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ, ನಬಾರ್ಡ್‌ಗಳು ಸೂಚನೆ ನೀಡಿವೆ. ಒಂದೊಮ್ಮೆ ಯಾವುದೇ ಬ್ಯಾಂಕ್ ಸಾಲಕ್ಕೆ ಜಮಾ ಮಾಡಿಕೊಂಡರೆ ಜಿಲ್ಲಾಧಿಕಾರಿಗಳಿಗೆ ದೂರು ನೀಡಬೇಕು. ಜಿಲ್ಲಾಧಿಕಾರಿಗಳು ಬ್ಯಾಂಕ್ ವಿರುದ್ಧ ಕ್ರಮ ಕೈಗೊಳ್ಳುತ್ತಾರೆ.

• **ಕುರುಬೂರು ಶಾಂತಕುಮಾರ್** ರೈತ ಮುಖಂಡ

1 ರುಪಾಯಿ ಸಹ ಕಡಿತ ಮಾಡಬಾರದು

ಕೊರೋನಾ ಹೊಡೆತದಿಂದಾಗಿ ನಾಡಿನ ರೈತರು ಬಹಳ ಸಂಕಷ್ಟದಲ್ಲಿದ್ದಾರೆ. ಇಂತಹ ಸಮಯದಲ್ಲಿ ಬ್ಯಾಂಕ್‌ಗಳು ಸಭ್ಯತೆಯಿಂದ ನಡೆದುಕೊಳ್ಳಬೇಕು. ಬೆಂಬಲ ಬೆಲೆ ಯೋಜನೆಯಡಿ ರೈತರ ಖಾತೆಗೆ ಜಮೆಯಾದ ಹಣದಲ್ಲಿ ಒಂದು ರುಪಾಯಿಯನ್ನೂ ಸಹ ಸಾಲಕ್ಕೆ ಜಮಾ ಮಾಡಿಕೊಳ್ಳಬಾರದು ಎಂದು ರೈತ ಮುಖಂಡ ಕೋಡಿಹಳ್ಳಿ ಚಂದ್ರಶೇಖರ್ ಆಗ್ರಹಿಸಿದ್ದಾರೆ. 'ಕನ್ನಡಪ್ರಭ'ದೊಂದಿಗೆ ಮಾತನಾಡಿದ ಅವರು, ಮುಂದಿನ ಬಿತ್ತನೆ ಕಾರ್ಯಗಳಿಗೆ ಆ ಹಣ ಬಳಸಲು ಯೋಜನೆ ಹಾಕಿಕೊಂಡಿದ್ದ ರೈತರಿಗೆ ಬ್ಯಾಂಕ್‌ಗಳ ಕಾರ್ಯದಿಂದ ಭಾರಿ ಹೊಡೆತ ಬಿದ್ದಿದೆ. ಇಂತಹ ಸಮಯದಲ್ಲಿ ಸಾಲ ವಸೂಲಿಗೆ ಇಳಿದಿರುವುದು ಅಮಾನವೀಯ. ವಸೂಲಿ ಮಾಡಿರುವ ಸಾಲವನ್ನು ಕೂಡಲೇ ಆಯಾ ರೈತರ ಖಾತೆಗಳಿಗೆ ವಾಪಸ್ ಹಾಕಬೇಕು ಎಂದು ಒತ್ತಾಯಿಸಿದ್ದಾರೆ.

For more information visit
University Library Website
Web - uasbagrilibindia.org
E-mail- librarian@uasbangalore.edu.in